ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪಕ್ಷಾಂತರ ನಿಷೇಧ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 28/5/2010

# ಪಕ್ಷಾಂತರ ನಿಷೇಧ ಶಾಸನ ಇಂದು ವಿಚಾರ ವಿನಿಮಯ

28/5/20

ಸಂ.ಕ. ಸಮಾಚಾರ ಬೆಂಗಳೂರು

ಪಕ್ಷಾಂತರ ನಿಷೇಧ ಕಾಯ್ದೆಗೆ ಸಂಬಂಧಿಸಿದಂತೆ ಸಂವಿಧಾನದ ಹತ್ತನೇ ಅನುಸೂಚಿಯಲ್ಲಿ ಪೀಠಾಸೀನ ಅಧಿಕಾರಿಗಳಿಗೆ ಲಭ್ಯವಿರುವ ಅಧಿಕಾರ ಹಾಗೂ ಅದರಡಿಯಲ್ಲಿ ಬರುವ ನಿಯಮಗಳ ಕುರಿತಂತೆ ಅಭಿಪ್ರಾಯ ಸಂಗ್ರಹಿಸಲು ಮೇ 28ರಂದು ಸಂಸದೀಯ ಗಣ್ಯರ ಸಭೆ ಕರೆಯಲಾಗಿದೆ.

ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು, ಸಭೆಯಲ್ಲಿ ಎಲ್ಲ ಪಕ್ಷಗಳ 25 ಹಿರಿಯ ನಾಯಕರು



ಪಾಲ್ಗೊಂಡು ಚರ್ಚೆ ನಡೆಸುತ್ತಾರೆ. ಈಗಾಗಲೇ ಪಕ್ಷಾಂತರ ಕಾಯ್ದೆ ವಿಚಾರದಲ್ಲಿ ಕೈಗೊಳ್ಳುವ ಕ್ರಮಗಳ ಬಗ್ಗೆ ಸುಧಾರಣೆ ಬಗ್ಗೆ ಜೂ.10ರೊಳಗಾಗಿ ತಮ್ಮ ಅಭಿಪ್ರಾಯ ತಿಳಿಸಲು ತಜ್ಞರಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ನನ್ನ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಭೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ವಿಧಾನಸಭೆಯ ಉಪಾಧ್ಯಕ್ಷ ಆನಂದ ಮಾಮನಿ, ಸರ್ಕಾರದ ಮುಖ್ಯ ಸಚೇತಕ ವಿ ಸುನೀಲ್ ಕುಮಾರ್, ಉಪಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ, ಕಾನೂನು ಸಚಿವ ಜೆ.ಸಿ ಮಾಧುಸ್ವಾಮಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಶಾಸಕರಾದ ಕೆ.ಆರ್.ರಮೇಶ್ ಕುಮಾರ್, ಆರ್.ವಿ ದೇಶಪಾಂಡೆ, ಎಚ್.ಕೆ ಪಾಟೀಲ್, ಕೃಷ್ಣ ಬೈರೇಗೌಡ, ಮಾಜಿ ಮುಖ್ಯಮಂತ್ರಿ ಜೆಡಿಎಸ್‌ನ ಎಚ್.ಡಿ. ಕುಮಾರಸ್ವಾಮಿ, ರಾಜ್ಯಾಧ್ಯಕ್ಷ ಎಚ್.ಕೆ. ಕುಮಾರಸ್ವಾಮಿ ಮುಂತಾದವರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು. ಪಕ್ಷಾಂತರ ನಿಷೇಧ ಕಾಯ್ದೆ ಕುರಿತು 60ರ ದಶಕದಿಂದಲೂ ಚರ್ಚೆ ನಡೆಯುತ್ತಿದೆ. ಬಂದಿರುವ ಸರ್ಕಾರಗಳು ಆಯಾ ಕಾಲಕ್ಕೆ ತಕ್ಕಂತೆ ತಮ್ಮದೇ ಆದ ಕ್ರಮ ಕೈಗೊಂಡಿದ್ದಾರೆ. ಜನರ ಆಶಯಕ್ಕೆ ತಕ್ಕಂತೆ ಕಾನೂನು ರೂಪಿಸಬೇಕು ಎಂದು ಹಲವರು ಶ್ರಮ ಪಟ್ಟು ಪ್ರಾಮಾಣಿಕ ಪ್ರಯತ್ನ ನಡೆಸಿದ್ದಾರೆ. ಆದರೂ ಈ ಪಿಡುಗು ಮುಂದುವರಿದೆ. ಈ ಕುರಿತು ಸಾಕಷ್ಟು ಚರ್ಚೆ ನಡೆದಿದೆ. ಈ ಬಗ್ಗೆ ಆದಷ್ಟು ಬೇಗ ಪರಿಹಾರ ಸಿಗಲಿದೆ ಎಂದರು.